ಇ) ಸೇಡಂ ತಾಲ್ಲೂಕು ಉಪ ಕಾರಾಗೃಹವು ಯಾವಾಗ ಕಾರ್ಯಾರಂಭವಾಗುವುದು?

ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

ಅ) ಹೌದು.

ಆ) ಸೇಡಂ ತಾಲ್ಲೂಕು ಉಪ ಕಾರಾಗೃಹಕ್ಕೆ ಅಗತ್ಯವಿರುವ ಹುದ್ದೆಗಳು ಇನ್ನೂ ಸೃಜನೆಯಾಗಿಲ್ಲದಿರುವುದರಿಂದ ಸಾಧ್ಯವಾಗಿರುವುದಿಲ್ಲ.

ಇ) ಹುದ್ದೆಗಳು ಮಂಜೂರಾದ ತಕ್ಷಣವೇ ಕಾರ್ಯಾರಂಭಿಸ ಲಾಗುವುದು.

ಸೇಡಂ ಹಿರಿಯ ವಿಭಾಗ ನ್ಯಾಯಾಲಯ ಕಟ್ಟಡದ ಬಗ್ಗೆ

1349 (1318) ಡಾ: ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ವಿಧಾನ ಸಭಾ ಸದಸ್ಯರು (ಸೇಡಂ) : ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೇಡಂ (ಹಿರಿಯ ವಿಭಾಗ) ಸಿವಿಲ್ ನ್ಯಾಯಾಲಯದ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹೌದಾದರೆ ಸರ್ಕಾರ ಈ ಬಗ್ಗೆ ಕ್ರಮ ಕೈಗೊಂಡಿರುವುದೇ?

ಇ) 2007–08ನೇ ಸಾಲಿನ ಯೋಜನೆಗಳಲ್ಲಿ ನ್ಯಾಯಾಲಯದ ಕಟ್ಟಡಗಳ ನಿರ್ಮಾಣದ ಬಗ್ಗೆ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

ಅ) ಗುಲ್ಬರ್ಗಾ ಜಿಲ್ಲಾ ನ್ಯಾಯಾಧೀಶರಿಂದ ಅಂತಹ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.